ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತಮೂರನೆಯ ಅಧಿವೇಶನ
ಗುರುವಾರ, ದಿನಾಂಕ: 4ನೇ ಫೆಬ್ರುವರಿ, 2021

ಕೋವಿಡ್ ಸಂಕಷ್ಟದಲ್ಲಿ ಖಾಸಗಿ ಆಸ್ಪತ್ರೆಗಳ ಬಗ್ಗೆ

ಶ್ರೀ ಎಂ.ಪಿ. ಸುನೀಲ್ ಸುಬ್ರಮಣಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

386 (403) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೋವಿಡ್-19 ಸೋಂಕು ತೀವ್ರಗೊಂಡಿದ್ದ ಸಂದರ್ಭದಲ್ಲಿ ಇಲಾಖೆಯಿಂದ ಅಥವಾ ಬಿ.ಬಿ.ಎಂ.ಪಿ. ಯಿಂದ ಖಾಸಗಿ ಆಸ್ಪತ್ರೆಗಳಿಗೆ ಶಿಫಾರಸ್ಸುಗೊಂಡಿದ್ದ ರೋಗಿಗಳ ಆರೈಕೆಗೆ ಸರ್ಕಾರ ಖಾಸಗಿ ಆಸ್ಪತ್ರೆಗಳಿಗೆ ನೀಡಿದ ಹಣವೆಷ್ಟು; ಆಸ್ಪತ್ರೆಗಳವಾರು ಹಣ, ರೋಗಿಗಳ ಸಂಖ್ಯೆ ನೀಡಲಾದ ವೈದ್ಯೋಪಚಾರದ ವಿವರಗಳೊಂದಿಗೆ ಸಂಪೂರ್ಣ ವಿವರ ನೀಡುವುದು;

(ಆ) ಕೋವಿಡ್-19 ಸೋಂಕು ತೀವ್ರಗೊಂಡಿದ್ದ ಸಂದರ್ಭದಲ್ಲಿ ಇಲಾಖೆಯಿಂದ ಅಥವಾ ಬಿ.ಬಿ.ಎಂ.ಪಿ. ಯಿಂದ ಖಾಸಗಿ ಆಸ್ಪತ್ರೆಗೆ ಶಿಫಾರಸ್ಸು ಮಾಡಿದ ಸಂದರ್ಭದಲ್ಲಿ ಕಾನೂನು ಬಾಹಿರವಾಗಿ ಖಾಸಗಿ ಆಸ್ಪತ್ರೆಗಳು ರೋಗಿಗಳಿಂದ ಹಣ ಪಡೆದ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ; (ಪ್ರಕರಣವಾರು ವಿವರ ನೀಡುವುದು)

(ಇ) ಈ ರೀತಿಯಲ್ಲಿ ಸರ್ಕಾರದಿಂದ ಹಣ ಪಡೆದ ಜೊತೆಗೆ ರೋಗಿಗಳಿಂದಲೂ ಹಣ ಪಡೆದ ಆಸ್ಪತ್ರೆಗಳ ವಿರುದ್ಧ ಕ್ರಮ ಕೈಗೊಳ್ಳಲಾಗಿದೆಯೇ; (ವಿವರ ನೀಡುವುದು) ಇಲ್ಲವಾದಲ್ಲಿ, ಇವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲು ಇರುವ ತೊಡಕುಗಳೇನು? (ಸಂಪೂರ್ಣ ವಿವರ ಒದಗಿಸುವುದು)